19	ಕೋಲಾರ	1382	1800	3182
20	ಕೊಪ್ಪಳ	105	269	374
21	ಮಂಡ್ಯ	299	5668	5967
22	ಮೈಸೂರು	197	368	565
23	ರಾಯಚೂರು	105	1815	1920
24	ಶಿವಮೊಗ್ಗ	44	44	88
25	ತುಮಕೂರು	133	73	206
26	ಉತ್ತರ ಕನ್ನಡ	03	1708	1711
27	ಉಡುಪಿ	29	10	39
	ಒಟ್ಟು	**7,112**	**32,188**	**39,300**

638 (873) ಶ್ರೀ ಸಿದ್ದು ಸಾವದಿ (ಜಮಖಂಡಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಮಖಂಡಿ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಘಟಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳು ಎಷ್ಟು (ಪ್ರತ್ಯೇಕ ಮಾಹಿತಿ ಒದಗಿಸುವುದು)?

ಆ) ಈ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆಗಳು ಸರ್ಕಾರದ ಮುಂದೆ ಬಂದಿದೆಯೇ? ಹಾಗಿದ್ದಲ್ಲಿ, ಏನು ಕ್ರಮ ಜರುಗಿಸಿದ್ದೀರಿ? ಈ ಬಗ್ಗೆ ಕೈಗೊಂಡ ಕ್ರಮವೇನು?

ಇ) ಮೇಲ್ದರ್ಜೆಗೇರಿಸಲು ಇರುವ ನಿಯಮಾವಳಿಗಳೇನು?

ಈ) ರಬಕವಿ ಬನಹಟ್ಟಿ ನಗರ ಸಭೆಯಲ್ಲಿ ಇರುವ ಸಮುದಾಯ ಆರೋಗ್ಯ ಕೇಂದ್ರವು ಒಂದು ಲಕ್ಷ ಜನಸಂಖ್ಯೆಯನ್ನು ಹೊಂದಿರುವುದರಿಂದ ಇದನ್ನು ಮೇಲ್ದರ್ಜೆಗೇರಿಸಲು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ, ಯಾವಾಗ ಮೇಲ್ದರ್ಜೆಗೇರಿಸಲಾಗುವುದು?

ಉ) ತೇರದಾಳ ನಗರದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಹ ಮೇಲ್ದರ್ಜೆಗೇರಿಸಲು ಈಗಾಗಲೇ ಪ್ರಸ್ತಾವನೆಯನ್ನು ಕಳಿಸಲಾಗಿದೆ ಸುಮಾರು

50,000 ಜನಸಂಖ್ಯೆ ಹೊಂದಿರುವ ಕೇವಲ ಪ್ರಾಥಮಿಕ ಚಿಕಿತ್ಸಾ ಕೇಂದ್ರದ ಸೌಲಭ್ಯ ಸಾಲದಾಗಿರುವುದರಿಂದ ಇದನ್ನು ಯಾವಾಗ ಮೇಲ್ದರ್ಜೆಗೇರಿಸಲಾಗುವುದು?

ಊ) ಈ ಎಲ್ಲಾ ಕೇಂದ್ರಗಳಲ್ಲಿ ಸಿಬ್ಬಂದಿಯ ಕೊರತೆ ಇದ್ದು ಯಾವಾಗ ನೇಮಕ ಮಾಡಲು ಕ್ರಮ ಕೈಗೊಳ್ಳಲಾಗುವುದು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಜಮಖಂಡಿ ತಾಲ್ಲೂಕಿನಲ್ಲಿ ಒಂದು ತಾಲ್ಲೂಕು ಆಸ್ಪತ್ರೆ, ಒಂದು ಸಮುದಾಯ ಆರೋಗ್ಯ ಕೇಂದ್ರ ಹಾಗೂ 7 ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ ಹಾಗೂ ಪ್ರಾಥಮಿಕ ಆರೋಗ್ಯ ಘಟಕಗಳು ಇರುವುದಿಲ್ಲ

ತಾ ಆಸ್ಪತ್ರೆ, ಜಮಖಂಡಿ	100	ಹಾಸಿಗೆ
ಸ ಆ ಕೇಂದ್ರ, ರಬಕವಿ ಬನಹಟ್ಟಿ	30	ಹಾಸಿಗೆ
ಪ್ರಾ. ಆ ಕೇಂದ್ರ, ಗೋಡೆ	6	ಹಾಸಿಗೆ
ಪ್ರಾ ಆ ಕೇಂದ್ರ, ಹಿಪ್ಪರಗಿ	6	ಹಾಸಿಗೆ
ಪ್ರಾ. ಆ ಕೇಂದ್ರ, ಚಿಮ್ಮಡ	6	ಹಾಸಿಗೆ
ಪ್ರಾ. ಆ ಕೇಂದ್ರ, ಕೊಣ್ಣೂರು	6	ಹಾಸಿಗೆ
ಪ್ರಾ. ಆ ಕೇಂದ್ರ, ಲಿಂಗನೂರು	6	ಹಾಸಿಗೆ
ಪ್ರಾ. ಆ ಕೇಂದ್ರ, ಸಾವಳಗಿ	6	ಹಾಸಿಗೆ
ಪ್ರಾ. ಆ ಕೇಂದ್ರ, ತೇರದಾಳ	6	ಹಾಸಿಗೆ

ಆ) ಬಂದಿದೆ ಮಾರ್ಗಸೂಚಿ ಪ್ರಕಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು

ಇ) ರಾಷ್ಟ್ರೀಯ ಮಾರ್ಗಸೂಚಿ ಪ್ರಕಾರ 30,000 ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ 1,20,000 ಜನಸಂಖ್ಯೆಗೆ ಒಂದು ಸಮುದಾಯ ಆರೋಗ್ಯ ಕೇಂದ್ರಗಳನ್ನು ತೆರೆಯಬಹುದಾಗಿದೆ

ಈ) ರಬಕವಿ ಬನಹಟ್ಟಿನಗರ ಸಭೆ ವ್ಯಾಪ್ತಿಯ ಆಸ್ಪತ್ರೆಯನ್ನು ಈಗಾಗಲೇ ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಲಾಗಿದೆ

ಊ) ತೇರದಾಳ ನಗರದಲ್ಲಿ ಈಗಾಗಲೇ ಪ್ರಾಥಮಿಕ ಆರೋಗ್ಯ ಕೇಂದ್ರವಿದ್ದು ಪಟ್ಟಣವನ್ನು ಒಳಗೊಂಡಂತೆ 57,000 ಜನಸಂಖ್ಯೆಗೆ ಆರೋಗ್ಯ ಸೌಲಭ್ಯಗಳನ್ನು ಒದಗಿಸುತ್ತದೆ ಮಾರ್ಗಸೂಚಿ ಪ್ರಕಾರ ಮೇಲ್ದರ್ಜೆಗೇರಿಸಲು ಪರಿಶೀಲಿಸಲಾಗುವುದು

ಋ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ಖಾಯಂ ಆಗಿ 500 ವೈದ್ಯಾಧಿಕಾರಿಗಳನ್ನು ಎರಡು ಹಂತಗಳಲ್ಲಿ ವಿಶೇಷ ನೇಮಕಾತಿ ನಿಯಮಗಳ ಅಡಿ ಭರ್ತಿ ಮಾಡಲು ಅನುಮತಿ ನೀಡಿದ್ದು, ಇದರಲ್ಲಿ ಮೊದಲ ಹಂತವಾಗಿ 250 ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ ಆಯ್ಕೆ ಪಟ್ಟಿ ಪ್ರಕಟಿಸಿದ ನಂತರ 2ನೇ ಹಂತದಲ್ಲಿ 250 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೆಯೇ 2807 ಖಾಲಿ ಇರುವ ಅರೆ–ವೈದ್ಯಕೀಯ ಸಿಬ್ಬಂದಿಗಳನ್ನು ಭರ್ತಿ ಮಾಡುವ ಸಲುವಾಗಿ ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ ಅರ್ಜಿ ಆಹ್ವಾನಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಖಾಲಿ ಹುದ್ದೆಗಳನ್ನು ಆದ್ಯತೆಯ ಮೇರೆಗೆ ತುಂಬಲಾಗುವುದು

ಇದಲ್ಲದೆ ಗುತ್ತಿಗೆ ಆಧಾರದ ಮೇಲೆ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ನೇಮಕ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ

874 ಶ್ರೀ ಸಿದ್ದು ಸಾವದಿ (ಜಮಖಂಡಿ) ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಮಖಂಡಿ ತಾಲ್ಲೂಕಿನಲ್ಲಿರುವ ಅಲ್ಪಸಂಖ್ಯಾತರ ಸಂಖ್ಯೆ ಎಷ್ಟು?

ಆ) ಯಾವ ಯಾವ ಸಮುದಾಯದವರನ್ನು ಅಲ್ಪಸಂಖ್ಯಾತರೆಂದು ಕರೆಯಲಾಗುವುದು (ಪ್ರತ್ಯೇಕವಾಗಿ ಅಂಕಿ ಅಂಶಗಳನ್ನು ಒದಗಿಸುವುದು)?

ಇ) ಯಾವ ಯಾವ ಸಮುದಾಯದ ಜನರಿಗೆ ಇಲಾಖೆಯಿಂದ ದಿನಾಂಕ 01 04 2004 ರಿಂದ ಇಲ್ಲಿಯವರೆಗೆ ಒದಗಿಸಲಾಗಿರುವ ವಿವಿಧ ಸೌಲಭ್ಯಗಳಾವುವು? (ಮಾಹಿತಿ ಒದಗಿಸುವುದು)?

ಈ) ತಾಲ್ಲೂಕಿನಲ್ಲಿ ಅನೇಕ ಪಟ್ಟಣಗಳಲ್ಲಿರುವ ಐತಿಹಾಸಿಕ ಮಸೀದಿಗಳನ್ನು ಮತ್ತು ಬಸ್ತಿಗಳ ಜೀರ್ಣೋದ್ಧಾರಕ್ಕೆ ಅನುದಾನ ಅವಶ್ಯಕತೆ ಇದ್ದು, ಯಾವಾಗ ಮಂಜೂರು ಮಾಡಲಾಗುವುದು?

ಉ) ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಯಾವ ಯಾವ ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ?